**ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ**
ಶ್ರೀ ಚಾಮರಾಜೇಂದ್ರ ಸಂಸ್ಕೃತ ಮಹಾವಿದ್ಯಾಲಯ ಆವರಣ
ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018.

KARNATAKA SAMSKRIT UNIVERSITY

**कर्नाटक-संस्कृत-विश्वविद्यालय:**
श्री चामराजेन्द्र संस्कृत महाविद्यालयस्य परिसर:
पम्पमहाकविमार्ग:, चामराजपेटे, बेङ्गलूरु – ५६००१८.

ಸಂಖ್ಯೆ: ಕಸಂವಿ/ಪ್ರ.ಸ/2016–17/2535-24 ದಿನಾಂಕ: 21.10.2016

ಮಾನ್ಯರೆ,

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ **ಪ್ರಶಾಸನ ಸಮಿತಿ ಮೂವತ್ತನಾಲ್ಕನೆಯ** ಸಭೆಯು ದಿನಾಂಕ: **20.10.2016ರ ಗುರುವಾರ ಬೆಳಿಗ್ಗೆ 11.00 ಗಂಟೆಗೆ** ವಿಶ್ವವಿದ್ಯಾಲಯದ ಕಾರ್ಯಾಲಯದಲ್ಲಿ ನಡೆಯಿತು. ಸಭೆಯ ಅಧ್ಯಕ್ಷತೆಯನ್ನು ಮಾನ್ಯ ಕುಲಪತಿಗಳು ವಹಿಸಿದ್ದರು. ಈ ಪತ್ರದೊಂದಿಗೆ ಆ ದಿನ ನಡೆದ ಸಭೆಯ ನಡಾವಳಿಯನ್ನು ತಮ್ಮ ಅವಗಾಹನೆಗೆ ಕಳುಹಿಸಿಕೊಡಲಾಗಿದೆ.

ಈ ಸಭೆಯ ನಡಾವಳಿಗಳಿಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಈ ಪತ್ರ ತಲುಪಿದ ದಿನಾಂಕದಿಂದ ಹತ್ತು ದಿನಗಳೊಳಗಾಗಿ ಸಲ್ಲಿಸಲು ಕೋರಲಾಗಿದೆ.

ವಂದನೆಗಳೊಂದಿಗೆ,

ಕುಲಸಚಿವರು

ಇವರಿಗೆ,

1. **ಪ್ರೊ. ಕೆ.ಈ. ರಾಧಾಕೃಷ್ಣ,** # 6, ಆರ್.ಐ.ಇ.ಎಚ್.ಎಸ್. ಲೇಔಟ್, ಜೆ.ಸಿ. ನಗರ, ಮಹಾಲಕ್ಷ್ಮೀಪುರಂ, ಬೆಂಗಳೂರು – 560086.
2. **ಡಾ. ವನಿತಾ ರಾಮಸ್ವಾಮಿ,** ಎ–002, ಆದರ್ಶ ರೆಸಿಡೆನ್ಸಿ, 47ನೇ ಅಡ್ಡರಸ್ತೆ, 8ನೇ ಬ್ಲಾಕ್, ಜಯನಗರ, ಬೆಂಗಳೂರು– 560070
3. **ವಿದ್ವಾನ್ ಕೆ. ಭೀಮಪ್ಪ,** ನಂ. 26, ಅಂಬೇಡ್ಕರ್ ಕಲ್ಯಾಣ ಮಂಟಪದ ಹತ್ತಿರ, ರಾಜೇಂದ್ರ ನಗರ, ಚಿತ್ರದುರ್ಗ ಜಿಲ್ಲೆ.
4. **ಶ್ರೀ ಪರಪ್ಪ ಬಸಪ್ಪ ಬಾವಲತ್ತಿ,** ರಾಮಪುರ, ರಬಕವಿ, ಜಮಖಂಡಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ.
5. **ಪ್ರೊ. ಮೈಕೆಲ್,** ಸಂಸ್ಕೃತ ಪ್ರಾಧ್ಯಾಪಕರು, ಗುಲ್ಬರ್ಗಾ ವಿಶ್ವವಿದ್ಯಾಲಯ, ಜ್ಞಾನಗಂಗಾ, ಕಲಬುರಗಿ–585106.
6. **ಶ್ರೀಮತಿ ಜಯಶ್ರೀ ವಿ. ಕೊರತಿ,** ಕೆನರಾ ವೆಲ್‌ಫ್ಲೇರ್ ಟ್ರಸ್ಟ್ ಎಜುಕೇಷನ್ ಕಾಲೇಜು, ದಾಂಡೇಲಿ, ಉತ್ತರ ಕನ್ನಡ ಜಿಲ್ಲೆ – 581325
7. **ವಿದ್ವಾನ್ ಸಿದ್ಧಮಲ್ಲ ಸ್ವಾಮಿ,** ನಂ. 136/1, ಶ್ರೀ ನೀಲಕಂಠಸ್ವಾಮಿ ಮಠ, ಹರಿಶ್ಚಂದ್ರ ರಸ್ತೆ, ಖಿಲ್ಲೆ ಮೊಹಲ್ಲಾ, ಮೈಸೂರು–570009
8. **ಶ್ರೀ ಗಜಾನನ ಲಕ್ಷ್ಮೀನಾರಾಯಣ ಭಟ್ಟ,** ಉಮ್ಮಚಗಿ, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ – 581347
9. **ಡಾ. ಕೆ. ಸುಧಾಕರ್,** ನಂ. 346/347, 'ಪ್ರೇಮವಿಲ್ಲಾ', 14ನೇ ಮುಖ್ಯರಸ್ತೆ, ಆರ್.ಎಂ.ವಿ. ಬಡಾವಣೆ, ಸದಾಶಿವನಗರ, ಬೆಂಗಳೂರು – 560080.
10. **ಕ್ಯಾಪ್ಟನ್ ಗಣೇಶ್ ಕಾರ್ಣಿಕ್,** ಹೆಚ್ಎ–41, ಇಸ್‌ಗ್ರೇಸ್, ಬೆನರೀಸ್ ಅಪಾರ್ಟ್‌ಮೆಂಟ್, ಮಾರ್ಟೀನ್ ಫೇಸ್ ರಸ್ತೆ, ಹ್ಯಾಟ್ ಹಿಲ್, ಮಂಗಳೂರು–575006
11. **ಅಪರ ಮುಖ್ಯ ಕಾರ್ಯದರ್ಶಿಗಳು,** ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು–560001
12. **ಅಪರ ಮುಖ್ಯ ಕಾರ್ಯದರ್ಶಿಗಳು,** ಹಣಕಾಸು ಇಲಾಖೆ, ವಿಧಾನಸೌಧ, ಬೆಂಗಳೂರು–560001
13. **ಸರ್ಕಾರದ ಕಾರ್ಯದರ್ಶಿ,** ಕಂದಾಯ ಇಲಾಖೆ (ಧಾರ್ಮಿಕ ದತ್ತಿ ವಿಭಾಗ) ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು–560001
14. **ಪ್ರಾದೇಶಿಕ ನಿರ್ದೇಶಕರು,** ಯುಜಿಸಿ–ನೈರುತ್ಯ ಪ್ರಾದೇಶಿಕ ಕೇಂದ್ರ, ಪ್ರಸನ್ನಕುಮಾರ್ ಬ್ಲಾಕ್, ಅರಮನೆ ರಸ್ತೆ, ಬೆಂಗಳೂರು–09,
15. **ನಿರ್ದೇಶಕರು,** ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಅರಮನೆ ಆವರಣ, ಮೈಸೂರು–570001.
16. **ಆಯುಕ್ತರು,** ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು–560002.
17. **ಆಯುಕ್ತರು,** ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು–560001
18. **ನಿರ್ದೇಶಕರು,** ತಾಂತ್ರಿಕ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ ಬೆಂಗಳೂರು–560001
19. **ನಿರ್ದೇಶಕರು,** ಪದವಿಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560012
20. **ನಿರ್ದೇಶಕರು,** ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು–560009
21. **ಆಯುಕ್ತರು,** ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು–560001

ಪ್ರತಿಗಳು:

1. **ಘನತೆವೆತ್ತ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು,** ರಾಜಭವನ, ಬೆಂಗಳೂರು – 560001
2. **ಮಾನ್ಯ ಕುಲಪತಿಯವರ ಆಪ್ತಶಾಖೆ,** ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು.
3. ಕಛೇರಿ ಪ್ರತಿ 4. ರಕ್ಷತಾ ಪ್ರತಿ 5. ಜಾಲತಾಣಕ್ಕೆ ಅಳವಡಿಸಲು – ತುರ್ತು

ದೂರವಾಣಿ: 080 – 26701303 / 26705387; ಇ–ಮೇಲ್: karnatakasanskrituniversity@gmail.com
दूरवाणी: ०८०–२६७०१३०३; २६७०५३८७; ई-सङ्केत: – karnatakasanskrituniversity@gmail.com

**ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ**
ಶ್ರೀ ಚಾಮರಾಜೇಂದ್ರ ಸಂಸ್ಕೃತ ಮಹಾವಿದ್ಯಾಲಯ ಆವರಣ
ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018.

**कर्नाटक–संस्कृत–विश्वविद्यालयः**
श्री चामराजेन्द्र संस्कृत महाविद्यालयस्य परिसरः
पम्पमहाकविमार्गः, चामराजपेटे, बेङ्गलूरु – ५६००१८.

## ೨೦.೧೦.೨೦೧೬ರಂದು ನಡೆದ ಪ್ರಶಾಸನ ಸಮಿತಿ (ಸಿಂಡಿಕೇಟ್) ೩೪ನೇ ಸಭೆಯ ನಡಾವಳಿ

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ **ಪ್ರಶಾಸನ ಸಮಿತಿ ೩೪ನೇ ಸಭೆಯು** ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ **ಅಕ್ಟೋಬರ್ ೨೦, ೨೦೧೬ರ ಗುರುವಾರ ಬೆಳಿಗ್ಗೆ** ೧೧.೦೦ ಗಂಟೆಗೆ ವಿಶ್ವವಿದ್ಯಾಲಯದ ಕಾರ್ಯಾಲಯದಲ್ಲಿ ನಡೆಯಿತು. ಈ ಸಭೆಯಲ್ಲಿ ಕೆಳಕಂಡ ಮಾನ್ಯ ಸದಸ್ಯರು ಹಾಜರಿದ್ದರು.

**ಹಾಜರಿದ್ದವರು:**

| | |
|---|---|
| ೧. **ಪ್ರೊ. ಪದ್ಮಾಶೇಖರ್,** ಮಾನ್ಯ ಕುಲಪತಿಗಳು | ಅಧ್ಯಕ್ಷರು |
| ೨. **ಪ್ರೊ. ಕೆ.ಈ. ರಾಧಾಕೃಷ್ಣ,** ಶಿಕ್ಷಣತಜ್ಞರು, ಬೆಂಗಳೂರು | ಸದಸ್ಯರು |
| ೩. **ಡಾ. ವನಿತಾ ರಾಮಸ್ವಾಮಿ,** ನಿವೃತ್ತ ಪ್ರಾಧ್ಯಾಪಕರು, ಬೆಂಗಳೂರು | ಸದಸ್ಯರು |
| ೪. **ಶ್ರೀ ಕೆ. ಭೀಮಪ್ಪ,** ನಿವೃತ್ತ ಶಿಕ್ಷಣಾಧಿಕಾರಿಗಳು, ಚಿತ್ರದುರ್ಗ | ಸದಸ್ಯರು |
| ೫. **ಶ್ರೀ ಪರಪ್ಪ ಬಸಪ್ಪ ಬಾವಲತ್ತಿ,** ನಿವೃತ್ತ ಅಧ್ಯಾಪಕರು, ರಾಮಪುರ, ರಬಕವಿ | ಸದಸ್ಯರು |
| ೬. **ಶ್ರೀಮತಿ ಜಯಶ್ರೀ ವಿ. ಕೊರತಿ,** ಪ್ರಾಚಾರ್ಯರು, ದಾಂಡೇಲಿ | ಸದಸ್ಯರು |
| ೭. **ವಿದ್ವಾನ್ ಸಿದ್ಧಮಲ್ಲ ಸ್ವಾಮಿ,** ನಿವೃತ್ತ ಪ್ರಾಧ್ಯಾಪಕರು, ಮೈಸೂರು | ಸದಸ್ಯರು |
| ೮. **ಡಾ. ಮೈಕೆಲ್,** ಪ್ರಾಧ್ಯಾಪಕರು ಮತ್ತು ಡೀನ್, ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ | ಸದಸ್ಯರು |
| ೯. **ವಿದ್ವಾನ್ ಗಜಾನನ ಲಕ್ಷ್ಮೀನಾರಾಯಣ ಭಟ್ಟ,** ನಿವೃತ್ತ ಪ್ರಾಚಾರ್ಯರು, ಉಮ್ಮಚಗಿ | ಸದಸ್ಯರು |
| ೧೦. **ಕ್ಯಾಪ್ಟನ್ ಗಣೇಶ್ ಕಾರ್ಣಿಕ್,** ಮಾನ್ಯ ವಿಧಾನಪರಿಷತ್ ಸದಸ್ಯರು, ಬೆಂಗಳೂರು | ಸದಸ್ಯರು |
| ೧೧. **ನಿರ್ದೇಶಕರು,** ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು–560001 | |
| – ಇವರ ಪರವಾಗಿ **ಶ್ರೀಮತಿ ಮಂಜುಳಾ ಆರ್.,** ಹಿರಿಯ ಸಹಾಯಕ ನಿರ್ದೇಶಕರು | ಸದಸ್ಯರು |
| ೧೨. **ಪ್ರೊ. ವೈ.ಎಸ್. ಸಿದ್ದೇಗೌಡ,** ಕುಲಸಚಿವರು | ಸದಸ್ಯ ಕಾರ್ಯದರ್ಶಿ |

**ಗೈರುಹಾಜರಿ:**

| | |
|---|---|
| ೧. **ಡಾ. ಕೆ. ಸುಧಾಕರ್,** ಶಾಸಕರು(ಚಿಕ್ಕಬಳ್ಳಾಪುರ), ಬೆಂಗಳೂರು | ಸದಸ್ಯರು |
| ೨. **ಅಪರ ಮುಖ್ಯ ಕಾರ್ಯದರ್ಶಿಗಳು,** ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| ೩. **ಅಪರ ಮುಖ್ಯ ಕಾರ್ಯದರ್ಶಿಗಳು,** ಹಣಕಾಸು ಇಲಾಖೆ, ಬೆಂಗಳೂರು | ಸದಸ್ಯರು |
| ೪. **ಕಾರ್ಯದರ್ಶಿಗಳು,** ಕಂದಾಯ ಇಲಾಖೆ (ಧಾರ್ಮಿಕ ದತ್ತಿ ವಿಭಾಗ), ಬೆಂಗಳೂರು | ಸದಸ್ಯರು |
| ೫. **ಪ್ರಾದೇಶಿಕ ನಿರ್ದೇಶಕರು,** ಯುಜಿಸಿ–ನೈಋತ್ಯ ಪ್ರಾದೇಶಿಕ ಕೇಂದ್ರ, ಬೆಂಗಳೂರು–09 | ಸದಸ್ಯರು |
| ೬. **ಆಯುಕ್ತರು,** ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು | ಸದಸ್ಯರು |
| ೭. **ಆಯುಕ್ತರು,** ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು–560001 | ಸದಸ್ಯರು |
| ೮. **ನಿರ್ದೇಶಕರು,** ತಾಂತ್ರಿಕ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, ಬೆಂಗಳೂರು–560001 | ಸದಸ್ಯರು |
| ೯. **ನಿರ್ದೇಶಕರು,** ಪದವಿಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಬೆಂಗಳೂರು–560012 | ಸದಸ್ಯರು |
| ೧೦. **ನಿರ್ದೇಶಕರು,** ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು–560009 | ಸದಸ್ಯರು |
| ೧೧. **ನಿರ್ದೇಶಕರು,** ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಮೈಸೂರು | ಸದಸ್ಯರು |

ಸಭೆಯ ಆರಂಭಕ್ಕೆ ಮುನ್ನ ಮಾನ್ಯ ಕುಲಸಚಿವರು ಎಲ್ಲ ಗೌರವಾನ್ವಿತ ಸದಸ್ಯರನ್ನು ಸ್ವಾಗತಿಸಿದರು. ಅನಂತರ ಸಭೆಯಲ್ಲಿ ಕೆಳಕಂಡ ಕಾರ್ಯಸೂಚಿಗಳು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ಮಂಡಿತವಾಗಿ ನಿರ್ಣಯಗೊಂಡವು.

| | | |
|---|---|---|
| ವಿಷಯ 01 | **ವಿಷಯ ಮತ್ತು ಟಿಪ್ಪಣಿ** | **ಪ್ರಶಾಸನ ಸಮಿತಿ 33ನೇ ಸಭೆಯ ಅನುಪಾಲನಾ ವರದಿಯನ್ನು ಅನುಮೋದಿಸುವ ಬಗೆಗೆ.**<br>ಪ್ರಶಾಸನ ಸಮಿತಿ 33ನೇ ಸಭೆಯು ದಿನಾಂಕ: 05.07.2016ರಂದು ನಡೆಯಿತು. ಸಭೆಯ ನಿರ್ಣಯದಂತೆ ಕೈಗೊಳ್ಳಲಾದ ಅನುಪಾಲನಾ ವರದಿಯನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಪ್ರಶಾಸನ ಸಮಿತಿ 33ನೇ ಸಭೆಯ ಅನುಪಾಲನಾ ವರದಿಯನ್ನು ಸಭೆಯು ಅನುಮೋದಿಸಿತು.** |

| | | |
|---|---|---|
| ವಿಷಯ 02 | ವಿಷಯ ಮತ್ತು ಟಿಪ್ಪಣಿ | **'ಹಣಕಾಸು ಸಮಿತಿ' 22ನೇ ಸಭೆಯ ನಡಾವಳಿಗಳನ್ನು ಅನುಮೋದಿಸುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ 'ಹಣಕಾಸು ಸಮಿತಿ' 22ನೇ ಸಭೆಯು ದಿನಾಂಕ: 08.09.2016ರಂದು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ನಡೆಯಿತು. ಈ ಸಭೆಯ ನಡಾವಳಿಗಳನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **'ಹಣಕಾಸು ಸಮಿತಿ' 22ನೇ ಸಭೆಯ ನಡಾವಳಿಗಳನ್ನು ಸಭೆಯು ಅನುಮೋದಿಸಿತು.** |
| ವಿಷಯ 03 | ವಿಷಯ ಮತ್ತು ಟಿಪ್ಪಣಿ | **'ಪ್ರಶಿಕ್ಷಣ ಪರಿಷತ್ತಿ'ನ 17ನೇ ಸಭೆಯ ನಡಾವಳಿಗಳನ್ನು ಅನುಮೋದಿಸುವ ಬಗೆಗೆ.**ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ 'ಪ್ರಶಿಕ್ಷಣ ಪರಿಷತ್ತಿ'ನ 17ನೇ ಸಭೆಯು ದಿನಾಂಕ: 14.03.2016ರಂದು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ನಡೆಯಿತು. ಈ ಸಭೆಯ ನಡಾವಳಿಗಳನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **'ಪ್ರಶಿಕ್ಷಣ ಪರಿಷತ್ತಿ'ನ 17ನೇ ಸಭೆಯ ನಡಾವಳಿಗಳನ್ನು ಸಭೆಯು ಅನುಮೋದಿಸಿತು.** |
| ವಿಷಯ 04 | ವಿಷಯ ಮತ್ತು ಟಿಪ್ಪಣಿ | **ವಿಶ್ವವಿದ್ಯಾಲಯದ 2015-16ನೇ ಸಾಲಿನ ಆರ್ಥಿಕ ಲೆಕ್ಕಪರಿಶೋಧನೆಯನ್ನು ನಡೆಸುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ 2015-16ನೇ ಸಾಲಿನ ಜಮಾ ಮತ್ತು ಖರ್ಚಿನ ಲೆಕ್ಕಪತ್ರಗಳು ಅಂತಿಮಗೊಂಡಿದ್ದು, ದಿನಾಂಕ 08.09.2016ರಂದು ನಡೆದ ಹಣಕಾಸು ಸಮಿತಿಯಲ್ಲಿ ಮಂಡಿಸಲಾಯಿತು. **2015-16ನೇ ಸಾಲಿನ ಲೆಕ್ಕಪರಿಶೋಧನೆ ನಡೆಸಲು** ಹಣಕಾಸು ಸಮಿತಿಯ ಒಪ್ಪಿಗೆ ದೊರೆತ ಹಿನ್ನೆಲೆಯಲ್ಲಿ ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ವಿಶ್ವವಿದ್ಯಾಲಯದ 2015-16ನೇ ಸಾಲಿನ ಆರ್ಥಿಕ ಲೆಕ್ಕಪರಿಶೋಧನೆಯನ್ನು ನಡೆಸಲು ಸಭೆಯು ಒಪ್ಪಿಗೆ ನೀಡಿತು.** |
| ವಿಷಯ 05 | ವಿಷಯ ಮತ್ತು ಟಿಪ್ಪಣಿ | **ಶ್ರೀ ಪೂರ್ಣಪ್ರಜ್ಞ ಸಂಸ್ಕೃತ ಕಾಲೇಜು, ಚಿತ್ರದುರ್ಗ - ಈ ಕಾಲೇಜಿನ ಮಾನ್ಯತೆಯನ್ನು ನವೀಕರಿಸುವ ಬಗೆಗೆ.**<br>ಶ್ರೀ ಪೂರ್ಣಪ್ರಜ್ಞ ವಿದ್ಯಾಸಂಸ್ಥೆ (ರಿ.), ಚಿತ್ರದುರ್ಗ -ಈ ಸಂಸ್ಥೆಯ ಕಾರ್ಯದರ್ಶಿಗಳು ದಿನಾಂಕ 15.12.2015ರಲ್ಲಿ ಪತ್ರ ನೀಡಿ ತಮ್ಮ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಶ್ರೀ ಪೂರ್ಣಪ್ರಜ್ಞ ಸಂಸ್ಕೃತ ಕಾಲೇಜು, ಚಿತ್ರದುರ್ಗ -ಈ ಕಾಲೇಜಿನ ಮಾನ್ಯತೆಯನ್ನು ನವೀಕರಿಸುವಂತೆ ಕೋರಿರುತ್ತಾರೆ. ಈ ಸಂಬಂಧ ಪರಿಶೀಲಿಸಲು, ಪ್ರಶಾಸನ ಸಮಿತಿ ಸದಸ್ಯರಾದ ಡಾ. ವನಿತಾ ರಾಮಸ್ವಾಮಿ, ಇವರ ಅಧ್ಯಕ್ಷತೆಯ ಚತುಸ್ಸದಸ್ಯ ಸಮಿತಿಯನ್ನು ನೇಮಿಸಲಾಗಿತ್ತು. ಸದರಿ ಸಮಿತಿಯು ದಿನಾಂಕ 20.07.2016ರಂದು ಸದರಿ ಕಾಲೇಜಿಗೆ ಭೇಟಿ ನೀಡಿ ಪರಿಶೀಲಿಸಿ ವರದಿಯನ್ನು ಸಲ್ಲಿಸಿರುತ್ತದೆ. ಈ ವರದಿಯನ್ನು ಪ್ರಶಾಸನ ಸಮಿತಿಯ ಅವಗಾಹನೆಗೆ ಇರಿಸಿದೆ. ಮತ್ತು ಈ ಕಾಲೇಜಿನ ಮಾನ್ಯತೆ ಬಗ್ಗೆ ಸೂಕ್ತ ನಿರ್ಣಯಕ್ಕಾಗಿ ಮಂಡಿಸಿದೆ. |
| | ನಿರ್ಣಯ | **ಶ್ರೀ ಪೂರ್ಣಪ್ರಜ್ಞ ಸಂಸ್ಕೃತ ಕಾಲೇಜು, ಚಿತ್ರದುರ್ಗ - ಈ ಕಾಲೇಜಿನ ಮಾನ್ಯತೆಯನ್ನು ನವೀಕರಿಸುವ ಮೊದಲು ಸಂಬಂಧಪಟ್ಟ ಜಿಲ್ಲಾ ನೋಂದಣಾಧಿಕಾರಿಗಳಿಂದ ಕಾರ್ಯಕಾರಿ ಸಮಿತಿಯ ನವೀಕರಣದ ಬಗ್ಗೆ ದೃಢೀಕೃತ ಪ್ರತಿಯನ್ನು ಪಡೆದು ತದನಂತರ 2015-16ನೇ ಸಾಲಿನಿಂದ ಮಾನ್ಯತೆಯನ್ನು ನವೀಕರಿಸಲು ಸಭೆಯು ಸೂಚಿಸಿತು.** |
| ವಿಷಯ 06 | ವಿಷಯ ಮತ್ತು ಟಿಪ್ಪಣಿ | **ಅನುದಾನಿತ-ಅನುದಾನರಹಿತ ಸಂಸ್ಕೃತ ಕಾಲೇಜುಗಳ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ನಿಯಮಾವಳಿಯ ಬಗೆಗೆ.**<br>ದಿನಾಂಕ 08.09.2015ರಂದು ನಡೆದ ಪ್ರಶಾಸನ ಸಮಿತಿಯ 28ನೇ ಸಭೆಯಲ್ಲಿ ಅನುದಾನಿತ-ಅನುದಾನರಹಿತ ಸಂಸ್ಕೃತ ಕಾಲೇಜುಗಳ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ನಿಯಮಾವಳಿಯನ್ನು ರಚಿಸಲು ನಿರ್ಣಯ ಕೈಗೊಂಡು ಪ್ರೊ. ಶ್ರೀನಿವಾಸ ವರಖೇಡಿ, ಪ್ರಾಧ್ಯಾಪಕರು ಮತ್ತು ಡೀನ್, ಕ.ಸಂ.ವಿ., ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿತ್ತು. ಈ ಸಮಿತಿಯು ದಿನಾಂಕ: 11.03.2016ರಂದು ಸಭೆ ಸೇರಿ, ಇತರೆ ವಿಶ್ವವಿದ್ಯಾಲಯಗಳಲ್ಲಿ ಈಗಾಗಲೇ ಚಾಲ್ತಿಯಲ್ಲಿರುವ ನಿಯಮಾವಳಿಗಳನ್ನು ಪರಿಶೀಲಿಸಿ, ಈ ನಿಯಮಾವಳಿಯ ಕರಡು ಪ್ರತಿಯನ್ನು ರೂಪಿಸಿದೆ. ಈ ನಿಯಮಾವಳಿಯನ್ನು ಮುಂದಿನ ಕ್ರಮಕ್ಕಾಗಿ ಸರ್ಕಾರಕ್ಕೆ ಕಳುಹಿಸಲು ಅನುಮೋದನೆಗಾಗಿ ಪ್ರಶಾಸನ ಸಮಿತಿಯ ನಿರ್ಣಯಕ್ಕಾಗಿ ಮಂಡಿಸಿದೆ. |
| | ನಿರ್ಣಯ | **ಅನುದಾನಿತ-ಅನುದಾನರಹಿತ ಸಂಸ್ಕೃತ ಕಾಲೇಜುಗಳ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ನಿಯಮಾವಳಿಯಲ್ಲಿ ಶುಲ್ಕಕ್ಕೆ ಸಂಬಂಧಿಸಿದಂತೆ ಕೆಲವು ತಿದ್ದುಪಡಿಗಳನ್ನು ಸಭೆಯು ಸೂಚಿಸಿತು. ಈ ತಿದ್ದುಪಡಿಗಳನ್ನು ಮಾಡಿದ ನಂತರ ನಿಯಮಾನುಸಾರ ಮುಂದಿನ ಕ್ರಮಕ್ಕಾಗಿ ಸರ್ಕಾರಕ್ಕೆ ಸಲ್ಲಿಸಲು ಸಭೆಯು ಅನುಮೋದಿಸಿತು.** |
| ವಿಷಯ 07 | ವಿಷಯ ಮತ್ತು ಟಿಪ್ಪಣಿ | **ಶ್ರೀ ಕೆ.ಬಿ. ದಿವಾಕರ್, ವಾಹನ ಚಾಲಕರು, ಕ.ಸಂ.ವಿ. -ಇವರನ್ನು ಕರ್ತವ್ಯದ ಮೇಲೆ ಹಾಜರುಪಡಿಸಿಕೊಂಡಿರುವ ಬಗೆಗೆ.**<br>ದಿನಾಂಕ 16.03.2016ರಂದು ನಡೆದ ಪ್ರಶಾಸನ ಸಮಿತಿಯ 32ನೇ ಸಭೆಯ ನಿರ್ಣಯದಂತೆ, ಶ್ರೀ ಕೆ. ಬಿ. |

| | | |
|---|---|---|
| | | ದಿವಾಕರ್, ವಾಹನ ಚಾಲಕರು, ಕ.ಸಂ.ವಿ., ಇವರು, ಕುಲಸಚಿವರ ಮೊಹರನ್ನು ಸ್ವಂತಕ್ಕೆ ಬಳಸಿರುವ ಆರೋಪದ ಮೇಲೆ ಸೇವೆಯಿಂದ ಅಮಾನತ್ತುಗೊಳಿಸುವಂತೆಯೂ ಹಾಗೂ ಇವರ ಮೇಲಿನ ಈ ಆರೋಪದ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ಸಮಿತಿಯನ್ನು ನೇಮಿಸುವಂತೆ ತೀರ್ಮಾನಿಸಲಾಗಿತ್ತು. ದಿನಾಂಕ 16.03.2016ರಿಂದ ಜಾರಿಗೆ ಬರುವಂತೆ ಸದರಿ ಸಿಬ್ಬಂದಿಯನ್ನು ಸೇವೆಯಿಂದ ಅಮಾನತ್ತುಗೊಳಿಸಿ, ವಿಚಾರಣೆ ನಡೆಸಲು ಪ್ರಶಾಸನ ಸಮಿತಿಯ ಸದಸ್ಯರಾದ ಪ್ರೊ. ಕೆ.ಈ. ರಾಧಾಕೃಷ್ಣ, ಇವರ ಅಧ್ಯಕ್ಷತೆಯಲ್ಲಿ ವಿಚಾರಣಾ ಸಮಿತಿಯನ್ನು ನೇಮಿಸಲಾಯಿತು. ಈ ಸಮಿತಿಯು ಕಳೆದ 6 ತಿಂಗಳಿನಿಂದ ವಿಚಾರಣೆ ನಡೆಸುತ್ತಿದೆ. ಹೀಗಾಗಿ, ಅಮಾನತ್ತಾದ ನೌಕರನಿಗೆ ಕೆ.ಸಿ.ಎಸ್.ಆರ್. ನಿಯಮದಂತೆ ಶೇಕಡಾ 75ರಷ್ಟು ವೇತನ ಪಾವತಿಸಬೇಕಾಗಿತ್ತು. ಹಾಗಾಗಿ, ವಿಚಾರಣೆಯನ್ನು ಕಾಯ್ದಿರಿಸಿ, ದಿನಾಂಕ 20.09.2016ರಂದು ಮರಳಿ ಕರ್ತವ್ಯದ ಮೇಲೆ ಹಾಜರುಪಡಿಸಿಕೊಳ್ಳಲಾಗಿದೆ. ಈ ವಿಷಯವನ್ನು ಪ್ರಶಾಸನ ಸಮಿತಿಯ ಅವಗಾಹನೆಗಾಗಿ ಮಂಡಿಸಿದೆ. |
| | ನಿರ್ಣಯ | **ಪ್ರಸ್ತುತ ವಿಚಾರಣೆ ಇನ್ನು ನಡೆಯುತ್ತಿರುವುದರಿಂದ ಸಾಧ್ಯವಾದಷ್ಟೂ ಬೇಗ ವಿಚಾರಣಾ ಸಮಿತಿಯಿಂದ ವರದಿಯನ್ನು ಪಡೆದು, ಆ ವರದಿಯನ್ನು ಆಧರಿಸಿ ಕ್ರಮಕೈಗೊಳ್ಳಲು ಪ್ರಾಧಿಕಾರಕ್ಕೆ ಅನುಮತಿ ನೀಡಲಾಯಿತು. ಮತ್ತು ಶ್ರೀ ಕೆ.ಬಿ. ದಿವಾಕರ್, ವಾಹನ ಚಾಲಕರು, ಕ.ಸಂ.ವಿ. ಇವರು ಕರ್ತವ್ಯಕ್ಕೆ ಹಾಜರಾಗಿರುವುದಕ್ಕೆ ಸಭೆಯು ಒಪ್ಪಿಗೆ ಸೂಚಿಸಿತು.** |
| ವಿಷಯ 08 | ವಿಷಯ ಮತ್ತು ಟಿಪ್ಪಣಿ | **ಶ್ರೀ ಶ್ರೀಶೈಲ ನಿಂಗಪ್ಪ ಲೋಣಿ, ಜವಾನ(ಡಿ ಗ್ರೂಪ್), ಕ.ಸಂ.ವಿ., ಇವರನ್ನು ಬಿಜಾಪುರದ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯಕ್ಕೆ ವರ್ಗಾಯಿಸುವ ಬಗೆಗೆ.**<br>ಶ್ರೀ ಶ್ರೀಶೈಲ ನಿಂಗಪ್ಪ ಲೋಣಿ, ಜವಾನ(ಡಿ ಗ್ರೂಪ್), ಕ.ಸಂ.ವಿ., ಇವರು ದಿನಾಂಕ : 10.12.2012ರಂದು ಸೇವೆಗೆ ಸೇರಿದ್ದು, ದಿನಾಂಕ 10.12.2014ರಂದು ಇವರ ಖಾಯಂಪೂರ್ವ ಸೇವಾವಧಿಯನ್ನು ತೃಪ್ತಿಕರವಾಗಿದೆ ಎಂದು ಘೋಷಿಸಲಾಗಿರುತ್ತದೆ. ಸದರಿ ನೌಕರರು ದಿನಾಂಕ: 21.07.2016ರಂದು ಅರ್ಜಿ ನೀಡಿ, ಬಿಜಾಪುರದಲ್ಲಿರುವ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯಕ್ಕೆ ವರ್ಗಾಯಿಸಿಕೊಡಬೇಕೆಂದು ಕೇಳಿಕೊಂಡಿರುತ್ತಾರೆ. ಸಭೆಯ ಅವಗಾಹನೆಗೆ ಹಾಗೂ ನಿರ್ಣಯಕ್ಕಾಗಿ ಮಂಡಿಸಿದೆ. |
| | ನಿರ್ಣಯ | **ಶ್ರೀ ಶ್ರೀಶೈಲ ನಿಂಗಪ್ಪ ಲೋಣಿ, ಜವಾನ(ಡಿ ಗ್ರೂಪ್), ಕ.ಸಂ.ವಿ., ಇವರನ್ನು ಬಿಜಾಪುರದ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯಕ್ಕೆ ವರ್ಗಾಯಿಸಲು, ಸದರಿ ವಿಶ್ವವಿದ್ಯಾಲಯವು ಹುದ್ದೆರಹಿತವಾಗಿ ಈ ಸಿಬ್ಬಂದಿಯ ಸೇವೆಯನ್ನು ಪಡೆಯಲು ಬಯಸಿದರೆ, ವಿಶ್ವವಿದ್ಯಾಲಯದ ಅಭ್ಯಂತರ ಇರುವುದಿಲ್ಲ ಎಂದು ಸಭೆಯು ಸೂಚಿಸಿತು.** |
| ವಿಷಯ 09 | ವಿಷಯ ಮತ್ತು ಟಿಪ್ಪಣಿ | **ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ವತಿಯಿಂದ 2016-17ನೇ ಸಾಲಿನ ವಲಯಮಟ್ಟ ಮತ್ತು ರಾಜ್ಯಮಟ್ಟದ ಸ್ಪರ್ಧೆಗಳನ್ನು ನಡೆಸಲು ಮತ್ತು ಅದಕ್ಕೆ ತಗಲುವ ಅಂದಾಜು ವೆಚ್ಚಕ್ಕೆ ಅನುಮತಿ ನೀಡುವ ಬಗೆಗೆ.**<br>2016-17ನೇ ಸಾಲಿನಲ್ಲಿ ಸಂಸ್ಕೃತ ಶಿಕ್ಷಣ ನಿರ್ದೇಶನಾಲಯವು ರಾಜ್ಯದ ಸಂಸ್ಕೃತ ಪಾಠಶಾಲೆಗಳಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನವೆಂಬರ್ ತಿಂಗಳಿನಲ್ಲಿ ವಲಯ ಮಟ್ಟದ ಸ್ಪರ್ಧೆಗಳನ್ನು, ವಲಯ ಮಟ್ಟದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಡಿಸೆಂಬರ್ ತಿಂಗಳಿನಲ್ಲಿ ರಾಜ್ಯಮಟ್ಟದ ಸ್ಪರ್ಧೆಗಳನ್ನು ನಡೆಸಲು ವಿಶ್ವವಿದ್ಯಾಲಯವು ನಿರ್ಣಯಿಸಿದೆ. ಈ ಸ್ಪರ್ಧೆಗಳನ್ನು ನಡೆಸಲು ರೂ. 3,50,000/-ಗಳು ವೆಚ್ಚವಾಗಬಹುದೆಂದು ಅಂದಾಜಿಸಲಾಗಿದೆ. ಪ್ರಶಾಸನ ಸಮಿತಿಯ ಅನುಮತಿ ಕೋರಿದೆ. |
| | ನಿರ್ಣಯ | **ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ವತಿಯಿಂದ 2016-17ನೇ ಸಾಲಿನ ವಲಯಮಟ್ಟ ಮತ್ತು ರಾಜ್ಯಮಟ್ಟದ ಸ್ಪರ್ಧೆಗಳನ್ನು ನಡೆಸಲು ಹಾಗೂ ಅಂದಾಜು ವೆಚ್ಚಕ್ಕೆ ಸಭೆಯು ಒಪ್ಪಿಗೆ ನೀಡಿತು.** |
| ವಿಷಯ 10 | ವಿಷಯ ಮತ್ತು ಟಿಪ್ಪಣಿ | **ಡಾ. ಎಂ.ಕೆ. ಶ್ರೀಧರ್, ಇವರ ಪಿಂಚಣಿನಿಧಿ ಮತ್ತು ರಜಾವಂತಿಕೆಯನ್ನು ಸರ್ಕಾರಕ್ಕೆ ಪಾವತಿಸುವ ಬಗ್ಗೆ**<br>ಡಾ. ಎಂ.ಕೆ. ಶ್ರೀಧರ್‌ರವರು ದಿನಾಂಕ: 07.06.2014ರಿಂದ ದಿನಾಂಕ: 19.10.2015ರವರೆಗೆ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದಲ್ಲಿ ನಿಯೋಜನೆಯ ಮೇರೆಗೆ ಕುಲಸಚಿವರಾಗಿ ಕರ್ತವ್ಯ ನಿರ್ವಹಿಸಿದ್ದು, ಈ ಅವಧಿಯಲ್ಲಿ ವೇತನವನ್ನು ತಮ್ಮ ಮಾತೃ ಇಲಾಖೆಯಲ್ಲಿಯೇ ಪಡೆದಿರುತ್ತಾರೆ. ಆದರೆ, ಸರ್ಕಾರಿ ಆದೇಶ ಸಂಖ್ಯೆ ಇಡಿ 151 ಯುಎನ್‌ಇ 2014 ದಿನಾಂಕ 13.10.2014ರಂತೆ, ಇವರಿಗೆ ರಜಾವೇತನ ವಂತಿಕೆ 11% ಹಾಗೂ ಪಿಂಚಣಿನಿಧಿ 12.5% ಪಾವತಿಸಬೇಕೆಂದು ಸೂಚಿಸಿರುವುದರಿಂದ, ಇದರ ಒಟ್ಟು ಮೊತ್ತ ರೂ. 2.31,324/-ಗಳಾಗಿರುತ್ತದೆ. ಈ ಹಣವನ್ನು ಸರ್ಕಾರದ ಖಜಾನೆಗೆ ಪಾವತಿಸಲು ಪ್ರಶಾಸನ ಸಮಿತಿಯ ಅನುಮೋದನೆ ಕೋರಿದೆ. |
| | ನಿರ್ಣಯ | **ಡಾ. ಎಂ.ಕೆ. ಶ್ರೀಧರ್ -ಇವರ ಪಿಂಚಣಿನಿಧಿ ಮತ್ತು ರಜಾವಂತಿಕೆಯನ್ನು ಸರ್ಕಾರಕ್ಕೆ ಪಾವತಿಸಲು ಸಭೆಯು ಒಪ್ಪಿಗೆ ನೀಡಿತು.** |

| | | |
|---|---|---|
| ವಿಷಯ 11 | ವಿಷಯ ಮತ್ತು ಟಿಪ್ಪಣಿ | **ಪ್ರೊ. ಶ್ರೀನಿವಾಸ ವರಖೇಡಿ, ಪ್ರಾಧ್ಯಾಪಕರು ಮತ್ತು ಡೀನ್ ಹಾಗೂ ಪ್ರೊ. ವಿ. ಗಿರೀಶ್‌ಚಂದ್ರ, ಪ್ರಾಧ್ಯಾಪಕರು ಮತ್ತು ಡೀನ್, ನಿರ್ದೇಶಕರು, ಸಂಸ್ಕೃತ ಶಿಕ್ಷಣ ನಿರ್ದೇಶನಾಲಯ, ಇವರ ಗಳಿಕೆ ರಜೆಯನ್ನು ಪಾವತಿಸುವ ಬಗ್ಗೆ.**<br>ಡಾ. ಪ್ರೊ. ಶ್ರೀನಿವಾಸ ವರಖೇಡಿ, ಪ್ರಾಧ್ಯಾಪಕರು ಮತ್ತು ಡೀನ್, ಇವರು ದಿನಾಂಕ 01.04.2011ರಿಂದ ದಿನಾಂಕ: 26.06.2013ರವರೆಗೆ ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರಾಗಿ ಮತ್ತು ದಿನಾಂಕ: 26.05.2014ರಿಂದ ದಿನಾಂಕ: 15.06.2015ರವರೆಗೆ ಪ್ರಭಾರಿ ಕುಲಪತಿಯಾಗಿ ಕಾರ್ಯ-ನಿರ್ವಹಿಸಿರುತ್ತಾರೆ. ಈ ಅವಧಿಗೆ ಬರುವ ಗಳಿಕೆ ರಜೆಯನ್ನು ಇವರ ಖಾತೆಗೆ ವರ್ಗಾಯಿಸಲು ಪ್ರಶಾಸನ ಸಮಿತಿಯ ಅನುಮೋದನೆಗೆ ಮಂಡಿಸಿದೆ.<br>ಪ್ರೊ. ವಿ. ಗಿರೀಶ್ ಚಂದ್ರ, ಪ್ರಾಧ್ಯಾಪಕರು ಮತ್ತು ಡೀನ್, ಇವರು ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರಾಗಿ ದಿನಾಂಕ: 26.06.2013ರಿಂದ ಇಲ್ಲಿಯವರೆಗೂ ಕಾರ್ಯನಿರ್ವಹಿಸುತ್ತಿದ್ದಾರೆ. ಇವರ ಈ ಅವಧಿಯ ಗಳಿಕೆ ರಜೆಯನ್ನು ನಿಯಮಾನುಸಾರ ಇವರ ಖಾತೆಗೆ ವರ್ಗಾಯಿಸಲು ಹಾಗೂ ಸೇವಾ ಪುಸ್ತಕಕ್ಕೆ ನಮೂದಿಸಲು ಪ್ರಶಾಸನ ಸಮಿತಿಯ ಅನುಮೋದನೆ ಕೋರಿದೆ. |
| | ನಿರ್ಣಯ | **ಪ್ರೊ. ಶ್ರೀನಿವಾಸ ವರಖೇಡಿ, ಪ್ರಾಧ್ಯಾಪಕರು ಮತ್ತು ಡೀನ್ ಹಾಗೂ ಪ್ರೊ. ವಿ. ಗಿರೀಶ್ ಚಂದ್ರ, ಪ್ರಾಧ್ಯಾಪಕರು ಮತ್ತು ಡೀನ್, ನಿರ್ದೇಶಕರು, ಸಂಸ್ಕೃತ ಶಿಕ್ಷಣ ನಿರ್ದೇಶನಾಲಯ, ಇವರ ಗಳಿಕೆ ರಜೆಯನ್ನು ಪಾವತಿಸಲು ಸಭೆಯು ಒಪ್ಪಿಗೆ ನೀಡಿತು.** |
| ವಿಷಯ 12 | ವಿಷಯ ಮತ್ತು ಟಿಪ್ಪಣಿ | **ಸಂಸ್ಕೃತ ಸಂಶೋಧನ ಸಂಸತ್‌ನ 'ಆಡಳಿತ ಮಂಡಳಿ' ಎರಡನೆಯ ಸಭೆ ಮತ್ತು 'ಪ್ರಸಾರಾಂಗ ಸಲಹಾ ಸಮಿತಿ' ಎರಡನೆಯ ಸಭೆಯ ನಡಾವಳಿಗಳನ್ನು ಅನುಮೋದಿಸುವ ಬಗೆಗೆ.**<br>ಸಂಸ್ಕೃತ ಸಂಶೋಧನ ಸಂಸತ್‌ನ 'ಆಡಳಿತ ಮಂಡಳಿ' ಎರಡನೆಯ ಸಭೆಯು ದಿನಾಂಕ: 25.08.2016ರಂದು ಹಾಗೂ 'ಪ್ರಸಾರಾಂಗ ಸಲಹಾ ಸಮಿತಿ' ಎರಡನೆಯ ಸಭೆಯು ದಿನಾಂಕ: 25.08.2016ರಂದು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ನಡೆಯಿತು. ಈ ಸಭೆಗಳಲ್ಲಿ ಹಲವು ವಿಷಯಗಳು ಪ್ರಸ್ತಾಪಗೊಂಡು ಅನುಮೋದನೆಗೊಂಡವು. ಈ ಸಭೆಗಳ ನಡಾವಳಿಗಳನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಸಂಸ್ಕೃತ ಸಂಶೋಧನ ಸಂಸತ್‌ನ 'ಆಡಳಿತ ಮಂಡಳಿ' ಎರಡನೆಯ ಸಭೆ ಮತ್ತು 'ಪ್ರಸಾರಾಂಗ ಸಲಹಾ ಸಮಿತಿ' ಎರಡನೆಯ ಸಭೆಯ ನಡಾವಳಿಗಳನ್ನು ಸಭೆಯು ಅನುಮೋದಿಸಿತು.** |
| **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು** | | |
| ವಿಷಯ 01 | ವಿಷಯ ಮತ್ತು ಟಿಪ್ಪಣಿ | **ರಾಷ್ಟ್ರೀಯ ಮಟ್ಟದ ವಿಚಾರ ಸಂಕಿರಣದ ಹೆಚ್ಚುವರಿ ವೆಚ್ಚವನ್ನು ಪಾವತಿಸುವ ಬಗೆಗೆ.**<br>ವಿಶ್ವವಿದ್ಯಾಲಯವು ಪ್ರತಿ ವರ್ಷವು ಹಲವಾರು ವಿಚಾರ ಸಂಕಿರಣಗಳನ್ನು ನಡೆಸುತ್ತಿದ್ದು ಈಗಾಗಲೇ ಇಸ್ಕಾನ್ ಸಂಸ್ಥೆಯ ಸಹಯೋಗದೊಂದಿಗೆ ದಿನಾಂಕ: 05.08.2016 ಮತ್ತು 06.08.2016ರಂದು **"ಭಕ್ತಿಪರಂಪರೆ"** ವಿಷಯದಲ್ಲಿ ರಾಷ್ಟ್ರಮಟ್ಟದ ವಿಚಾರ ಸಂಕಿರಣವನ್ನು ಯಶಸ್ವಿಯಾಗಿ ನಡೆಸಿರುತ್ತದೆ. ಇದಕ್ಕೆ ವಿವಿಯಿಂದ ರೂ. 50,000-00 ವೆಚ್ಚ ಮಾಡಲು ಪ್ರಶಾಸನ ಸಮಿತಿಯು ಒಪ್ಪಿಗೆ ನೀಡಿತ್ತು. ಈ ವಿಚಾರ ಸಂಕಿರಣಕ್ಕೆ ಹೆಚ್ಚುವರಿಯಾಗಿ ರೂ.5614.00ಗಳು ಖರ್ಚಾಗಿದ್ದು, ಈ ಮೊತ್ತವನ್ನು ಪಾವತಿಸಲು ಅನುಮೋದನೆಗಾಗಿ ಸಭೆಯಲ್ಲಿ ಮಂಡಿಸಿದೆ. |
| | ನಿರ್ಣಯ | **"ಭಕ್ತಿಪರಂಪರೆ" ವಿಷಯದಲ್ಲಿ ನಡೆದ ರಾಷ್ಟ್ರೀಯ ಮಟ್ಟದ ವಿಚಾರ ಸಂಕಿರಣದ ಹೆಚ್ಚುವರಿ ವೆಚ್ಚವನ್ನು ಪಾವತಿಸಲು ಸಭೆಯು ಅನುಮೋದಿಸಿತು.** |
| ವಿಷಯ 02 | ವಿಷಯ ಮತ್ತು ಟಿಪ್ಪಣಿ | **'ಪುನರ್‌ಜನ್ಮ' ವಿಷಯ ಕುರಿತ ರಾಷ್ಟ್ರೀಯ ಮಟ್ಟದ ವಿಚಾರ ಸಂಕಿರಣವನ್ನು ನಡೆಸುವ ಬಗೆಗೆ.**<br>ವಿಶ್ವವಿದ್ಯಾಲಯವು "ಪುನರ್‌ಜನ್ಮ" ವಿಷಯು ಕುರಿತ ರಾಷ್ಟ್ರಮಟ್ಟದ ವಿಚಾರ ಸಂಕಿರಣವನ್ನು ನಡೆಸಲು ಉದ್ದೇಶಿಸಿದೆ. ಈ ವಿಚಾರ ಸಂಕಿರಣಕ್ಕೆ ರೂ. 3,50,000/-ಗಳು ವೆಚ್ಚವಾಗಬಹುದೆಂದು ಅಂದಾಜಿಸಲಾಗಿದೆ. ಈ ಕಾರ್ಯಕ್ರಮಕ್ಕೆ ಸಹಯೋಗ ನೀಡುವಂತೆ ನವದೆಹಲಿಯ ರಾಷ್ಟ್ರೀಯ ಸಂಸ್ಕೃತ ಸಂಸ್ಥಾನಕ್ಕೆ ಪತ್ರ ಬರೆಯಲಾಗಿದೆ. ಈ ವಿಚಾರ ಸಂಕಿರಣವನ್ನು ನಡೆಸಲು ಅನುಮೋದನೆಗಾಗಿ ಸಭೆಯಲ್ಲಿ ಮಂಡಿಸಿದೆ. |
| | ನಿರ್ಣಯ | **'ಪುನರ್‌ಜನ್ಮ' ವಿಷಯ ಕುರಿತ ರಾಷ್ಟ್ರೀಯ ಮಟ್ಟದ ವಿಚಾರ ಸಂಕಿರಣವನ್ನು ರಾಷ್ಟ್ರೀಯ ಸಂಸ್ಕೃತ ಸಂಸ್ಥಾನದ ಸಹಯೋಗದೊಂದಿಗೆ ನಡೆಸಲು ಹಾಗೂ ಅದಕ್ಕೆ ತಗಲುವ ವೆಚ್ಚಕ್ಕೆ ಸಭೆಯು ಅನುಮೋದಿಸಿತು.** |

| | | |
|---|---|---|
| ವಿಷಯ 03 | ವಿಷಯ ಮತ್ತು ಟಿಪ್ಪಣಿ | **ರಾಜ್ಯಮಟ್ಟದ ಸಂಸ್ಕೃತ ಭಾಷಣ–ಶಲಾಕಾ, ಮುಂತಾದ ಸ್ಪರ್ಧೆಗಳನ್ನು ನಡೆಸುವ ಬಗೆಗೆ.**<br>ರಾಷ್ಟ್ರೀಯ ಸಂಸ್ಕೃತ ಸಂಸ್ಥಾನವು ಡಿಸೆಂಬರ್ ತಿಂಗಳ 28 ಮತ್ತು 29ರಂದು ತ್ರಿಪುರಾದಲ್ಲಿ ಅಖಿಲ ಭಾರತ ಮಟ್ಟದ ಸ್ಪರ್ಧೆಗಳನ್ನು ನಡೆಸುತ್ತಿದ್ದು, ಅದಕ್ಕೆ ಪೂರ್ವಭಾವಿಯಾಗಿ ಕರ್ನಾಟಕ ರಾಜ್ಯಮಟ್ಟದಲ್ಲಿ ವಿಶ್ವವಿದ್ಯಾಲಯವು ಸಂಸ್ಕೃತ ಭಾಷಣ–ಶಲಾಕಾ ಸ್ಪರ್ಧೆಗಳನ್ನು ಪ್ರತೀ ವರ್ಷದಂತೆ ನಡೆಸಬೇಕಾಗಿರುತ್ತದೆ. ಈ ವರ್ಷ ನವೆಂಬರ್ 2 ಮತ್ತು 3ರಂದು ಉಡುಪಿಯಲ್ಲಿ ರಾಜ್ಯಮಟ್ಟದ ಸ್ಪರ್ಧೆಗಳನ್ನು ನಡೆಸಲಿದೆ. ಕಳೆದ ವರ್ಷ ಈ ಸ್ಪರ್ಧೆಗಳಿಗಾಗಿ ಒಟ್ಟು ಮೊತ್ತ ರೂ. 5,70,404/–ಗಳು ಖರ್ಚಾಗಿರುತ್ತದೆ. ಈ ವರ್ಷವೂ ಕೂಡಾ ಸ್ಪರ್ಧೆಗಳ ಆಯೋಜನೆಗಾಗಿ ರೂ. 6,00,000/–ಗಳ ವೆಚ್ಚವನ್ನು ಅಂದಾಜಿಸಲಾಗಿದೆ. ವಿಜೇತರಾದ ಸ್ಪರ್ಧಿಗಳಿಗೆ ಪ್ರಥಮ ಬಹುಮಾನ ರೂ. 5000/–, ದ್ವಿತೀಯ ಬಹುಮಾನ ರೂ. 3000/– ಹಾಗೂ ತೃತೀಯ ಬಹುಮಾನ ರೂ. 2000/–ಗಳನ್ನು ನೀಡಲಾಗುವುದು. ಅಂದಾಜು ಮೊತ್ತಕ್ಕೆ ಅನುಮೋದನೆ ಕೋರಿ ಮಂಡಿಸಿದೆ. |
| | ನಿರ್ಣಯ | **ರಾಜ್ಯಮಟ್ಟದ ಸಂಸ್ಕೃತ ಭಾಷಣ–ಶಲಾಕಾ, ಮುಂತಾದ ಸ್ಪರ್ಧೆಗಳನ್ನು ನಡೆಸಲು ಹಾಗೂ ಇದಕ್ಕೆ ತಗಲುವ ವೆಚ್ಚಕ್ಕೆ ಸಭೆಯು ಅನುಮೋದಿಸಿತು.** |

**ಪ್ರೊ. ವೈ.ಎಸ್. ಸಿದ್ದೇಗೌಡ**
ಸದಸ್ಯ ಕಾರ್ಯದರ್ಶಿ

**ಪ್ರೊ. ಪದ್ಮಾಶೇಖರ್**
ಅಧ್ಯಕ್ಷರು